ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ 2015–16ನೇ ಸಾಲಿನಲ್ಲಿ ಮಹಾತ್ಮಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ ಆವರ್ತಕ ವೆಚ್ಚಗಳಿಗಾಗಿ ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡುವ – ಕುರಿತು

ಓದಲಾಗಿದೆ 1. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ /36/ಜೈಅಯೋ/2015 ಬೆಂಗಳೂರು, ದಿನಾಂಕ 19.05.2015

2. MGIRED ರವರ ಪತ್ರ ದಿನಾಂಕ 10.07.2015

**ಪ್ರಸ್ತಾವನೆ :**

2015–16ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಮಹಾತ್ಮಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ (MGIRED) **ರೂ.202.00 ಲಕ್ಷಗಳನ್ನು** ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಒದಗಿಸಲಾಗಿದ್ದು, ಈ ಪೈಕಿ ಮೊದಲನೇ ಕಂತಾಗಿ **ರೂ.50.50 ಲಕ್ಷಗಳ** ಅನುದಾನವನ್ನು ಸಂಸ್ಥೆಗೆ ಬಿಡುಗಡೆ ಮಾಡಿದೆ.

ಓದಲಾದ(2)ರಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಬೆಂಗಳೂರು ರವರು ಕೋರಿರುವಂತೆ **2015–16ನೇ ಸಾಲಿನ ಎರಡನೇ ಕಂತಿನ ಅನುದಾನ ರೂ.50.50 ಲಕ್ಷಗಳನ್ನು** ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ **ಲೆಕ್ಕ ಶೀರ್ಷಿಕೆ 2501–04–105–0–02–059(ಯೋಜನೆ)ಯಡಿ** ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ/36/ಜೈಅಯೋ/2015 ಬೆಂಗಳೂರು, ದಿನಾಂಕ 06.08.2015**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ **2015–16ನೇ** ಸಾಲಿನಲ್ಲಿ, ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು ರವರಿಗೆ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಎರಡನೇ ~~ತ್ರೈಮಾಸಿಕ ಕಂತಾಗಿ ರೂ.~~**50.50ಲಕ್ಷಗಳನ್ನು** (ಐವತ್ತು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ) ಬಿಡುಗಡೆ ಮಾಡಿದೆ.

ಸದರಿ ಅನುದಾನವನ್ನು ಲೆಕ್ಕ ಶೀರ್ಷಿಕೆ **2501–04–105–0–02–059(ಯೋಜನೆ)**ಯಡಿ ಭರಿಸತಕ್ಕದ್ದು.

ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆರವರು ಗ್ರಾಂಟ್-ಇನ್-ಏಡ್ ಬಿಲ್ಲನ್ನು ಸಲ್ಲಿಸಿ, ನಿರ್ದೇಶಕರು (ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿರವರ ಮೇಲು ರುಜು ಪಡೆದು ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಿದ ಅನುದಾನವನ್ನು ಉದ್ದೇಶಿತ ಯೋಜನೆ ಯೋಜನೆಗಳಿಗಾಗಿ ವಿನಿಯೋಗಿಸುವುದು ಹಾಗೂ ಬಿಡುಗಡೆಯಾದ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ನು ಅನಧಿಕೃತ ಟಿಪ್ಪಣಿ ಸಂಖ್ಯೆ : **ಗ್ರಾಅಪ/479/ಪಿಬಿಎಸ್/2015** ದಿನಾಂಕ**31.07.2015**ರನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರುಗಳಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು.
3. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಉಪ ನಿರ್ದೇಶಕರು, (ತಾಂತ್ರಿಕ) ಗ್ರಾಮೂಸೌ ಕೋಶ, ಗ್ರಾಅಪ ಇಲಾಖೆ.
7. ಉಪ ನಿರ್ದೇಶಕರು, ಟ್ರೆಜರಿ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ. 49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
8. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.